ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ರಾಯಚೂರಿನಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳ ಕುರಿತು

ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು)

392 (507) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರ ಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ನಗರದಲ್ಲಿ ಇರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಕಟ್ಟಡ ನಿರ್ಮಾಣದ ಕಾಮಗಾರಿ ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಸದರಿ ಕಾಮಗಾರಿಗೆ ಖರ್ಚು ಮಾಡಿರುವ ಅನುದಾನ ಎಷ್ಟು ; ಕಾಮಗಾರಿ ಪೂರ್ಣಗೊಂಡಲ್ಲಿ ಕಾಲೇಜಿಗೆ ಹಸ್ತಾಂತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ನಗರದಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಮೂಲಸೌಕರ್ಯಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಕೇಂದ್ರ ಸರ್ಕಾರದ ನೀತಿ ಆಯೋಗ ಯೋಜನೆಯಡಿಯಲ್ಲಿ (Aspirational) ಮಹತ್ವಾಕಾಂಕ್ಷೆಯ ಜಿಲ್ಲೆಯಾಗಿ ಗುರುತಿಸಿಕೊಂಡಿರುವ ರಾಯಚೂರು ಜಿಲ್ಲೆಯಲ್ಲಿ ಶಿಕ್ಷಣ ಉತ್ತೇಜಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ರಾಯಚೂರು ಜಿಲ್ಲೆಗೆ ಇಲ್ಲಿವರೆವಿಗೂ ಸಿಕ್ಕಿರುವ ಸೌಕರ್ಯಗಳೇನು; ಈ ಯೋಜನೆಯಿಂದ ಬಿಡುಗಡೆಯಾದ ಅನುದಾನವೆಷ್ಟು ?